**National**
**Kannada**
**30.12.2025 19.35 hrs**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಬುಡಕಟ್ಟು ಜನಾಂಗದವರ ಉನ್ನತಿಗೆ ಒತ್ತು ನೀಡಬೇಕು – ರಾಷ್ಟ್ರಪತಿ ದ್ರೌಪದಿ ಮುರ್ಮು
2. ನೀತಿ ಆಯೋಗದಲ್ಲಿಂದು ತಜ್ಞರೊಂದಿಗೆ ಪ್ರಧಾನಿ ನರೇಂದ್ರ ಮೋದಿ ಬಜೆಟ್ ಪೂರ್ವ ಸಂವಾದ
3. ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ನಿವಾಸದ ಮೇಲೆ ಉಕ್ರೇನ್ ವಿಫಲ ಡ್ರೋನ್ ದಾಳಿ; ಪ್ರಧಾನಿ ನರೇಂದ್ರ ಮೋದಿ ಕಳವಳ
4. ಮಹಿಳಾ ಟಿ–20 ಕ್ರಿಕೆಟ್: ಭಾರತ ವಿರುದ್ಧ ಟಾಸ್ ಗೆದ್ದ ಶ್ರೀಲಂಕಾ ತಂಡ ಫೀಲ್ಡಿಂಗ್ ಆಯ್ಕೆ

***************

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಇಂದು ಜಾರ್ಖಂಡ್‌ನ ಗುಮ್ಲಾ ಜಿಲ್ಲೆಯಲ್ಲಿ ಅಂತಾರಾಜ್ಯ ಜನಸಾಂಸ್ಕೃತಿಕ ಸಮಾಗಮ್ ಸಮಾರೋಹ–ಕಾರ್ತಿಕ ಜಾತ್ರೆಯ ಸಮಾರೋಪ ಸಮಾರಂಭದಲ್ಲಿ ಭಾಗವಹಿಸಿದ್ದರು.

ಸ್ವಾಯತಶಿ ವಿಶ್ವವಿದ್ಯಾಲಯ ನಿರ್ಮಲ್ ಸಮಿತಿಯ ಆಶ್ರಯದಲ್ಲಿ ನಡೆದ ಸಭೆಯನ್ನುದ್ದೇಶಿಸಿ ಮಾತನಾಡಿದ ರಾಷ್ಟ್ರಪತಿ, ಬಾಬಾ ಕಾರ್ತಿಕ್ ಓರಾನ್ ಅವರನ್ನು ನೆನಪಿಸಿಕೊಂಡರು. ಬುಡಕಟ್ಟು ಜನಾಂಗದವರ ಉನ್ನತಿಗೆ ಒತ್ತು ನೀಡಬೇಕು ಎಂದು ಹೇಳಿದ ಅವರು, ಈ ಕಾರ್ತಿಕ ಜಾತ್ರೆಯಲ್ಲಿ ಶಿಕ್ಷಣಕ್ಕಾಗಿ ಮಾಡುವ ಪ್ರಯತ್ನಗಳು ಬಾಬಾ ಕಾರ್ತಿಕ್ ಓರಾನ್‌ಗೆ ನೀಡುವ ನಿಜವಾದ ಗೌರವವಾಗಿದೆ ಎಂದು ಅವರು ಹೇಳಿದರು.

***************

2026–27ರ ಕೇಂದ್ರ ಬಜೆಟ್‌ಗೆ ಮುಂಚಿತವಾಗಿ ಪ್ರಧಾನಿ ನರೇಂದ್ರ ಮೋದಿ ಅವರು ನವದೆಹಲಿಯ ನೀತಿ ಆಯೋಗದಲ್ಲಿ ಪ್ರಖ್ಯಾತ ಅರ್ಥಶಾಸ್ತ್ರಜ್ಞರು ಮತ್ತು ಆರ್ಥಿಕ ಕ್ಷೇತ್ರದ ತಜ್ಞರೊಂದಿಗೆ ಇಂದು ಸಂವಾದ ನಡೆಸಿದರು. ಅವರ ಅಭಿಪ್ರಾಯಗಳು ಮತ್ತು ಸಲಹೆಗಳನ್ನು ಪಡೆದರು.

ದೇಶದ ಪ್ರಸ್ತುತ ಆರ್ಥಿಕ ಪರಿಸ್ಥಿತಿ ಮತ್ತು ಭವಿಷ್ಯದ ಆದ್ಯತೆಗಳ ಕುರಿತು ತಜ್ಞರು ತಮ್ಮ ಅಭಿಪ್ರಾಯಗಳು ಮತ್ತು ಮೌಲ್ಯಮಾಪನಗಳನ್ನು ಹಂಚಿಕೊಳ್ಳಲು ಈ ಸಭೆ ವೇದಿಕೆಯಾಗಿ ಕಾರ್ಯನಿರ್ವಹಿಸಿತು. ಬೆಳವಣಿಗೆಯನ್ನು ಬೆಂಬಲಿಸಲು, ಸ್ಥೂಲ ಆರ್ಥಿಕ ಸ್ಥಿರತೆಯನ್ನು ಬಲಪಡಿಸಲು ಮತ್ತು ಉದಯೋನ್ಮುಖ ಸವಾಲುಗಳನ್ನು ಎದುರಿಸಲು ಮತ್ತಷ್ಟು ಸುಧಾರಣೆಗಳು ಅಗತ್ಯವಿರುವ ಕ್ಷೇತ್ರಗಳಲ್ಲಿ ಈ ಸಭೆಯು ಚರ್ಚೆಗಳನ್ನು ಒಳಗೊಂಡಿತ್ತು.

ನೀತಿ ಆಯೋಗದಲ್ಲಿ ನಡೆದ ಸಂವಾದವು ಸರ್ಕಾರವು ಮುಂದಿನ ಹಂತದ ಆರ್ಥಿಕ ಯೋಜನೆಗೆ ಸಿದ್ಧವಾಗುತ್ತಿರುವಾಗ ಅಮೂಲ್ಯವಾದ ಒಳನೋಟಗಳನ್ನು ಒದಗಿಸಿತು.

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್, ಉಪಾಧ್ಯಕ್ಷೆ ಸುಮನ್ ಬೇರಿ, ಸಿಇಒ ಬಿವಿಆರ್ ಸುಬ್ರಹ್ಮಣ್ಯಂ ಮತ್ತು ಹಿರಿಯ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.

***************

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ಸರ್ಕಾರಿ ನಿವಾಸದ ಮೇಲೆ ಉಕ್ರೇನ್ ಡ್ರೋನ್ ದಾಳಿ ವಿಫಲವಾದ ಹಿನ್ನೆಲೆಯಲ್ಲಿ, ರಷ್ಯಾದ ಪ್ರತಿಕ್ರಿಯೆ ರಾಜತಾಂತ್ರಿಕವಾಗಿರುವುದಿಲ್ಲ ಎಂದು ರಷ್ಯಾ ತಿಳಿಸಿದೆ.
ವಿದೇಶಾಂಗ ಸಚಿವಾಲಯದ ವಕ್ತಾರೆ ಮರಿಯಾ ಅವರು, ಅಮೆರಿಕದಲ್ಲಿ ಮಾತುಕತೆಗಳು ನಡೆಯುತ್ತಿದ್ದ ಸಂದರ್ಭದಲ್ಲಿ ಈ ದಾಳಿ ಸಂಭವಿಸಿದೆ. ಇದರಿಂದ ನಡೆಯುತ್ತಿರುವ ಶಾಂತಿ ಪ್ರಯತ್ನಗಳಿಗೆ ಧಕ್ಕೆ ಉಂಟಾಗಿದೆ ಎಂದು ಹೇಳಿದ್ದಾರೆ.

ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರ ನಿವಾಸದ ಮೇಲೆ ಉಕ್ರೇನ್ ದಾಳಿ ನಡೆದಿದೆ ಎಂಬ ವರದಿಗಳ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಇಂದು ತೀವ್ರ ಕಳವಳ ವ್ಯಕ್ತಪಡಿಸಿದ್ದಾರೆ.

ರಾಜತಾಂತ್ರಿಕ ಪ್ರಯತ್ನಗಳು ಮಾತ್ರ ಯುದ್ಧವನ್ನು ಕೊನೆಗೊಳಿಸಲು ಮತ್ತು ಶಾಶ್ವತ ಶಾಂತಿಯನ್ನು ಸಾಧಿಸಲು ಅತ್ಯಂತ ಕಾರ್ಯಸಾಧ್ಯವಾದ ಮಾರ್ಗವಾಗಿ ಉಳಿದಿವೆ. ಸಂಬಂಧಪಟ್ಟ ದೇಶಗಳು ಈ ಪ್ರಯತ್ನಗಳ ಮೇಲೆ ಗಮನಹರಿಸಬೇಕು ಮತ್ತು ಅವುಗಳನ್ನು ದುರ್ಬಲಗೊಳಿಸುವ ಯಾವುದೇ ಕ್ರಮಗಳನ್ನು ತಪ್ಪಿಸಬೇಕು ಎಂದು ಪ್ರಧಾನಿ ಸಾಮಾಜಿಕ ಜಾಲತಾಣದಲ್ಲಿ ತಿಳಿಸಿದ್ದಾರೆ.

ಇನ್ನೊಂದೆಡೆ, ಪುಟಿನ್ ಅವರೊಂದಿಗೆ ನಡೆದ ದೂರವಾಣಿ ಸಂಭಾಷಣೆಯಲ್ಲಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಈ ದಾಳಿಯಿಂದ ತಮಗೆ ಆಘಾತವಾಗಿದೆ ಎಂದು ಹೇಳಿದ್ದಾರೆ.

***************

2025ನೇ ವರ್ಷವನ್ನು ಆಡಳಿತ ಸುಧಾರಣೆಗಳಿಗೆ ಸಮರ್ಪಿಸಲಾಗಿದ್ದು, ಜೀವನ ಸುಲಭತೆ ಮತ್ತು ಕೆಲಸದ ಸುಲಭತೆ ಸಾಧಿಸುವುದು ಇದರ ಉದ್ದೇಶವಾಗಿದೆ ಎಂದು ಸಿಬ್ಬಂದಿ, ಸಾರ್ವಜನಿಕ ಕುಂದುಕೊರತೆಗಳು ಮತ್ತು ಪಿಂಚಣಿ ಖಾತೆ ರಾಜ್ಯ ಸಚಿವ ಡಾ. ಜಿತೇಂದ್ರ ಸಿಂಗ್ ಹೇಳಿದ್ದಾರೆ.

ನವದೆಹಲಿಯಲ್ಲಿ ಇಂದು ನಡೆದ ವರ್ಷಾಂತ್ಯದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಜೀವನ ಸುಲಭತೆಯನ್ನು ಸಾಧಿಸಲು ಸೇವೆಗಳನ್ನು ಒದಗಿಸುವವರಿಗೂ ಸಹ ಕೆಲಸದ ಸುಲಭತೆ ಒದಗಿಸಬೇಕೆಂದು ಹೇಳಿದರು.

***************

ಶಿವಗಿರಿ ಸಾಮರಸ್ಯದ ಜೀವಂತ ಉದಾಹರಣೆಯಾಗಿದೆ ಮತ್ತು ಶಿವಗಿರಿ ತೀರ್ಥಯಾತ್ರೆ ಆಧ್ಯಾತ್ಮಿಕ ಅನ್ವೇಷಣೆ ಮತ್ತು ಸಾಮಾಜಿಕ ಆರ್ಥಿಕ ಪ್ರಗತಿಯ ಪರಿಪೂರ್ಣ ಮಿಶ್ರಣವಾಗಿದೆ. ಜನರು, ವಿಶೇಷವಾಗಿ ಯುವಕರು, ಶ್ರೀ ನಾರಾಯಣ ಗುರುಗಳ ಬೋಧನೆಗಳಿಂದ ಸ್ಫೂರ್ತಿ ಪಡೆಯಬೇಕೆಂದು ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್ ತಿಳಿಸಿದರು.

ಇಂದು ಕೇರಳದ ವರ್ಕಲಾದಲ್ಲಿ ನಡೆದ 93ನೇ ಶಿವಗಿರಿ ತೀರ್ಥಯಾತ್ರೆಯ ಉದ್ಘಾಟನಾ ಸಮಾರಂಭದಲ್ಲಿ ಭಾಗವಹಿಸಿದರು.

ರಾಜ್ಯಪಾಲ ರಾಜೇಂದ್ರ ವಿಶ್ವನಾಥ್ ಅರ್ಲೇಕರ್, ಕೇಂದ್ರ ಸಚಿವ ಸುರೇಶ್ ಗೋಪಿ, ಸಚಿವ ಎಂ.ಬಿ. ರಾಜೇಶ್, ಸಂಸದ ಶಶಿ ತರೂರ್ ಮತ್ತು ಇತರರು ಉಪಸ್ಥಿತರಿದ್ದರು. ಉಪರಾಷ್ಟ್ರಪತಿಗಳು ನಾಲ್ಕು ಪುಸ್ತಕಗಳನ್ನು ಬಿಡುಗಡೆ ಮಾಡಿದರು.

***************

ತೃಣಮೂಲ ಕಾಂಗ್ರೆಸ್ ನೇತೃತ್ವದ ಸರ್ಕಾರದ ಅಡಿಯಲ್ಲಿ ವ್ಯಾಪಕ ಭ್ರಷ್ಟಾಚಾರ ಮತ್ತು ದುರಾಡಳಿತವು ಪಶ್ಚಿಮ ಬಂಗಾಳವನ್ನು ಹಾಳುಮಾಡಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ಆರೋಪಿಸಿದ್ದಾರೆ.

ಇಂದು ಕೋಲ್ಕತ್ತಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭದ್ರತಾ ವಿಷಯದಲ್ಲಿ ತೃಣಮೂಲ ಕಾಂಗ್ರೆಸ್ ವಿಫಲವಾಗಿದೆ. ಪಶ್ಚಿಮ ಬಂಗಾಳದ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಒಳನುಸುಳುವಿಕೆ ಸಮಸ್ಯೆಯನ್ನು ಪರಿಹರಿಸಲು ವಿಫಲರಾಗಿದ್ದಾರೆ. ಆರ್‌ಜಿ ಕರ್ ಮತ್ತು ಕಸ್ಬಾ ಕಾನೂನು ಕಾಲೇಜು ಅತ್ಯಾಚಾರ ಘಟನೆಗಳ ಕುರಿತು ರಾಜ್ಯದಲ್ಲಿ ಮಹಿಳೆಯರಿಗೆ ಭದ್ರತೆ ಮತ್ತು ಸುರಕ್ಷತೆ ಇಲ್ಲ ಎಂದು ಅವರು ಹೇಳಿದ್ದಾರೆ.

ಮುಂದಿನ ವರ್ಷ ನಡೆಯಲಿರುವ ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಬಿಜೆಪಿ ಮೂರನೇ ಎರಡರಷ್ಟು ಬಹುಮತದೊಂದಿಗೆ ಸರ್ಕಾರ ರಚಿಸಲಿದೆ ಎಂದ ಸಚಿವರು, ಬಂಗಾಳ ಗಡಿಯಿಂದ ನಡೆಯುತ್ತಿರುವ ಒಳನುಸುಳುವಿಕೆ ರಾಷ್ಟ್ರೀಯ ಭದ್ರತೆಯ ವಿಷಯವಾಗಿದೆ ಎಂದು ಅವರು ಹೇಳಿದರು.

***************

ಬೆಂಗಳೂರಿನಲ್ಲಿ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ –ಎಚ್‌ಎಎಲ್ ಹೆಲಿಕಾಪ್ಟರ್ ವಿಭಾಗದಲ್ಲಿ ಧ್ರುವ್ ಎನ್‌ಜಿ ಸಿವಿಲ್ ವೇರಿಯಂಟ್ ಹೆಲಿಕಾಪ್ಟರ್‌ನ ಉದ್ಘಾಟನಾ ಹಾರಾಟಕ್ಕೆ ಕೇಂದ್ರ ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್ ನಾಯ್ಡು ಇಂದು ಚಾಲನೆ ನೀಡಿದರು.

ಮುಂದಿನ ಪೀಳಿಗೆಯ ಈ ಅತ್ಯಾಧುನಿಕ ಲಘು ಹೆಲಿಕಾಪ್ಟರ್ ಅನ್ನು ಎಚ್.ಎ.ಎಲ್ ಸಂಸ್ಥೆ ಅಭಿವೃದ್ಧಿಪಡಿಸಿದ್ದು, ಅದನ್ನು ಈ ವರ್ಷದ ಆರಂಭದಲ್ಲಿ ನಡೆದ ಏರ್ ಶೋ 2025ರಲ್ಲಿ ಪ್ರದರ್ಶಿಸಲಾಗಿತ್ತು.

6 ರಿಂದ 14 ಪ್ರಯಾಣಿಕರ ಸಾಮರ್ಥ್ಯದ ಈ ಹೆಲಿಕಾಪ್ಟರ್ ಅನ್ನು ಪ್ರವಾಸೋದ್ಯಮ, ಗಣ್ಯರ ಪ್ರವಾಸ, ವಿಪತ್ತು ಮತ್ತು ಪ್ರವಾಹ ನಿರ್ವಹಣೆ ಮತ್ತಿತರ ಕಾರ್ಯಗಳಿಗೆ ಬಳಸಬಹುದಾಗಿದೆ. ಈ ಹೆಲಿಕಾಪ್ಟರ್, ಸ್ವದೇಶಿ, ಶಕ್ತಿ ಇಂಜಿನ್ ಹೊಂದಿದೆ. ಜೊತೆಗೆ ಹಲವು ಆಧುನಿಕ ಸೌಕರ್ಯಗಳನ್ನು ಇದು ಒಳಗೊಂಡಿದ್ದು, ಗರಿಷ್ಠ 285 ಕಿಲೋಮೀಟರ್ ವೇಗದಲ್ಲಿ 630 ಕಿಲೋಮೀಟರ್ ದೂರವನ್ನು ಕ್ರಮಿಸಲಿದೆ. ಜೊತೆಗೆ ಇದು 2 ಸಾವಿರದ 33 ಕೆಜಿ ತೂಕವನ್ನು ಹೊತ್ತೊಯ್ಯುವ ಸಾಮರ್ಥ್ಯ ಹೊಂದಿದೆ.

***************

ಉತ್ತರಾಖಂಡದ ಡೆಹ್ರಾಡೂನ್‌ನಲ್ಲಿ ನಡೆದ ತ್ರಿಪುರಾ ವಿದ್ಯಾರ್ಥಿನಿ ಏಂಜೆಲ್ ಚಕ್ಮಾ ಅವರ ಹತ್ಯೆಯನ್ನು ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ–ಎನ್‌ಎಚ್‌ಆರ್‌ಸಿ ಗಮನಕ್ಕೆ ತೆಗೆದುಕೊಂಡಿದೆ. ಎನ್‌ಎಚ್‌ಆರ್‌ಸಿ ಸದಸ್ಯ ಪ್ರಿಯಾಂಕ್ ಕನೂಂಗೊ ಅವರ ಅಧ್ಯಕ್ಷತೆಯ ಪೀಠವು ರಾಜ್ಯ ಸರ್ಕಾರಕ್ಕೆ ನೋಟಿಸ್ ಜಾರಿ ಮಾಡಿ, ಈ ವಿಷಯದಲ್ಲಿ ಇಲ್ಲಿಯವರೆಗೆ ತೆಗೆದುಕೊಂಡ ಕ್ರಮಗಳ ಕುರಿತು ವಿವರವಾದ ವರದಿಯನ್ನು ಕೋರಿದೆ.

***************

ದೂರಸಂಪರ್ಕ ಇಲಾಖೆಯು ರಾಷ್ಟ್ರೀಯ ಆವರ್ತನ ಹಂಚಿಕೆ ಯೋಜನೆ–ಎನ್‌ಎಫ್‌ಎಪಿ– 2025 ಅನ್ನು ಬಿಡುಗಡೆ ಮಾಡಿದೆ. ಇದು ದೇಶದಲ್ಲಿ ರೇಡಿಯೋ–ಆವರ್ತನ ಸ್ಪೆಕ್ಟ್ರಮ್‌ನ ನಿರ್ವಹಣೆ ಮತ್ತು ಹಂಚಿಕೆಯನ್ನು ನಿಯಂತ್ರಿಸುವ ಪ್ರಮುಖ ನೀತಿ ದಾಖಲೆಯಾಗಿದೆ. ಎನ್‌ಎಫ್‌ಎಪಿ –2025 ಇಂದಿನಿಂದ ಜಾರಿಗೆ ಬಂದಿದೆ ಎಂದು ಸಂವಹನ ಸಚಿವಾಲಯ ತಿಳಿಸಿದೆ.

***************

ಮುಂದಿನ ವರ್ಷದ ಗಣರಾಜ್ಯೋತ್ಸವ ಪರೇಡ್‌ನಲ್ಲಿ 28 ರಾಜ್ಯಗಳು ಮತ್ತು 8 ಕೇಂದ್ರಾಡಳಿತ ಪ್ರದೇಶಗಳಿಂದ ಎರಡು ಸಾವಿರದ ನಾಲ್ಕುನೂರು ಎನ್‌ಸಿಸಿ ಕೆಡೆಟ್‌ಗಳು ಭಾಗವಹಿಸಲಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಯುವ ವಿನಿಮಯ ಕಾರ್ಯಕ್ರಮದಡಿಯಲ್ಲಿ ಈ ವರ್ಷ 25 ಸ್ನೇಹಪರ ವಿದೇಶಗಳ ಕೆಡೆಟ್‌ಗಳು ಮತ್ತು ಅಧಿಕಾರಿಗಳು ಸಹ ಆಚರಣೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಅದು ಹೇಳಿದೆ.

***************

ದೇಶದ ಉತ್ತರ ಭಾಗಗಳಲ್ಲಿ ದಟ್ಟವಾದ ಮಂಜಿನ ಸ್ಥಿತಿಯಿಂದಾಗಿ ಇಂದು ರೈಲು ಮತ್ತು ವಿಮಾನ ಕಾರ್ಯಾಚರಣೆಯ ಮೇಲೆ ಪರಿಣಾಮ ಬೀರಿದೆ. ದೆಹಲಿಗೆ ಹೋಗುವ 20 ಕ್ಕೂ ಹೆಚ್ಚು ರೈಲುಗಳು ಮೂರು ಗಂಟೆಗಳಿಗಿಂತ ಹೆಚ್ಚು ತಡವಾಗಿ ಚಲಿಸುತ್ತಿವೆ. ಮಂಜಿನ ಹವಾಮಾನ ಮತ್ತು ಗೋಚರತೆ ಸಮಸ್ಯೆಯಿಂದಾಗಿ ಇಂದು 118 ವಿಮಾನಗಳನ್ನು ರದ್ದುಗೊಳಿಸಲಾಗಿದೆ.

ಪ್ರಯಾಣಿಕರು ವಿಮಾನದ ಸ್ಥಿತಿಯನ್ನು ಸಕ್ರಿಯವಾಗಿ ಪರಿಶೀಲಿಸುವಂತೆ ಮತ್ತು ಸಂಬಂಧಪಟ್ಟ ವಿಮಾನಯಾನ ಸಂಸ್ಥೆಗಳೊಂದಿಗೆ ಸಂಪರ್ಕದಲ್ಲಿರಲು ಸಾಮಾಜಿಕ ಜಾಲತಾಣದಲ್ಲಿ, ನಾಗರಿಕ ವಿಮಾನಯಾನ ಸಚಿವಾಲಯ ತಿಳಿಸಿದೆ

***************

ಇಂದು ನಿಧನರಾದ ಬಾಂಗ್ಲಾದೇಶದ ಮಾಜಿ ಪ್ರಧಾನಿ ಮತ್ತು ಬಾಂಗ್ಲಾದೇಶ ರಾಷ್ಟ್ರೀಯವಾದಿ ಪಕ್ಷದ ಅಧ್ಯಕ್ಷೆ ಬೇಗಂ ಖಲೀದಾ ಜಿಯಾ ಅವರ ಅಂತ್ಯಕ್ರಿಯೆಯಲ್ಲಿ ಪಾಲ್ಗೊಳ್ಳಲು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ನಾಳೆ ಢಾಕಾಗೆ ಭೇಟಿ ನೀಡಲಿದ್ದಾರೆ.

***************

ಕೇರಳದ ತಿರುವನಂತಪುರಂನಲ್ಲಿರುವ ಗ್ರೀನ್‌ಫೀಲ್ಡ್ ಅಂತಾರಾಷ್ಟ್ರೀಯ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ 5ನೇ ಮತ್ತು ಅಂತಿಮ ಮಹಿಳಾ ಟಿ–20 ಅಂತಾರಾಷ್ಟ್ರೀಯ ಪಂದ್ಯದಲ್ಲಿ ಭಾರತ – ಶ್ರೀಲಂಕಾ ಮುಖಾಮುಖಿಯಾಗಿದೆ. ಟಾಸ್ ಗೆದ್ದ ಶ್ರೀಲಂಕಾ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಇತ್ತೀಚಿನ ವರದಿಯಂತೆ ಶ್ರೀಲಂಕಾ ತಂಡ 6.5 ಓವರ್‌ಗಳಲ್ಲಿ 3 ವಿಕೆಟ್ ನಷ್ಟಕ್ಕೆ 48 ರನ್ ಗಳಿಸಿ ಆಡುತ್ತಿದೆ.